# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 468
2. ಸದಸ್ಯರ ಹೆಸರು : ಶ್ರೀ ಟಿ.ಎ.ಶರವಣ
   : (ವಿಧಾನ ಸಭೆಯಿಂದ ಚುನಾಯಿತರಾದವರು)
3. ಉತ್ತರಿಸುವ ದಿನಾಂಕ : 15.09.2022
4. ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿ

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಎಸಿಬಿಯನ್ನು ರದ್ದುಪಡಿಸಿ ಲೋಕಾಯುಕ್ತಕ್ಕೆ ಹೆಚ್ಚು ಕಾನೂನು ಬಲ ನೀಡಲು ಮಾನ್ಯ ಹೈಕೋರ್ಟ್ ನೀಡಿರುವ ಆದೇಶವನ್ನು ಜಾರಿಗೆ ತರಲು ಕಾನೂನು ಇಲಾಖೆ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ; | ಎಸಿಬಿಯನ್ನು ರದ್ದುಪಡಿಸಿ ಲೋಕಾಯುಕ್ತಕ್ಕೆ ಹೆಚ್ಚು ಕಾನೂನು ಬಲ ನೀಡಲು ಮಾನ್ಯ ಹೈಕೋರ್ಟ್ ನೀಡಿರುವ ಆದೇಶವನ್ನು ಅನುಷ್ಠಾನಗೊಳಿಸಲು ಸರ್ಕಾರವು ದಿನಾಂಕ:09.09.2022ರಂದು ಎಸಿಬಿಯನ್ನು ರದ್ದುಪಡಿಸಿ ಎಸಿಬಿಗೆ ನೀಡಲಾಗಿದ್ದ ಅಧಿಕಾರಗಳನ್ನು ಹಿಂಪಡೆದು ಆದೇಶಿಸಿರುತ್ತದೆ. |
| (ಆ) | ಲೋಕಾಯುಕ್ತಕ್ಕೆ ಹೆಚ್ಚಿನ ಕಾನೂನಾತ್ಮಕ ಬಲ ತಂದು ಕೊಡುವ ನಿಟ್ಟಿನಲ್ಲಿ ಕಾನೂನಿಗೆ ತಿದ್ದುಪಡಿ ತಂದು ಲೋಕಾಯುಕ್ತವನ್ನು ಬಲಪಡಿಸಲಾಗುವುದೆ; | ಕರ್ನಾಟಕ ಲೋಕಾಯುಕ್ತ ಸಂಸ್ಥೆಯು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರನ್ವಯ ಕಾರ್ಯನಿರ್ವಹಿಸುತ್ತಿರುತ್ತದೆ. ಭ್ರಷ್ಟಾಚಾರ ನಿಗ್ರಹ ದಳ ಸೃಜನೆಯ ಸಂದರ್ಭದಲ್ಲಿ ಭ್ರಷ್ಟಾಚಾರ ತಡೆ ಅಧಿನಿಯಮ 1988ರ ಕಲಂ 17ರಡಿ ಕರ್ನಾಟಕ ಲೋಕಾಯುಕ್ತ ಪೊಲೀಸ್ ವಿಭಾಗಕ್ಕೆ ನೀಡಲಾಗಿದ್ದ ತನಿಖಾಧಿಕಾರವನ್ನು ಮಾತ್ರ ಹಿಂಪಡೆದು ಭ್ರಷ್ಟಾಚಾರ ನಿಗ್ರಹ ದಳಕ್ಕೆ ನೀಡಲಾಗಿತ್ತು. ಪ್ರಸ್ತುತ, ಸರ್ಕಾರವು ಎಸಿಬಿಗೆ ನೀಡಲಾಗಿದ್ದ ಅಧಿಕಾರಗಳನ್ನು ಹಿಂಪಡೆದು, ಭ್ರಷ್ಟಾಚಾರ ನಿಗ್ರಹ ದಳ ರಚನೆಗೆ ಪೂರ್ವದಲ್ಲಿ ಕರ್ನಾಟಕ ಲೋಕಾಯುಕ್ತ ಪೊಲೀಸ್ ವಿಭಾಗಕ್ಕೆ ನೀಡಲಾಗಿದ್ದ ಅಧಿಕಾರಗಳನ್ನು ಸರ್ಕಾರದ ಆದೇಶ 09.09.2022ರಲ್ಲಿ ಮರುಸ್ಥಾಪಿಸಿ ಆದೇಶಿಸಿರುತ್ತದೆ. |
| (ಇ) | ಲೋಕಾಯುಕ್ತಕ್ಕೆ ರಾಜ್ಯ ಸರ್ಕಾರ ನೀಡಲು ಉದ್ದೇಶಿಸಿರುವ ಹೆಚ್ಚಿನ ಅಧಿಕಾರವಾದರೂ ಏನು; | |
| (ಈ) | ನ್ಯಾಯಾಲಯದ ಆದೇಶದ ಅನುಸಾರ ಎಸಿಬಿ ರದ್ದಾಗಿದ್ದು, ಲೋಕಾಯುಕ್ತಕ್ಕೆ ಹೆಚ್ಚಿನ ಅಧಿಕಾರ ನೀಡುವುದು ವಿಳಂಬವಾದರೆ ಅದರಿಂದ ನ್ಯಾಯಾಂಗ ನಿಂದನೆ ಆಗುವುದಿಲ್ಲವೇ? | ನ್ಯಾಯಾಲಯದ ಆದೇಶವನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಸರ್ಕಾರವು ದಿನಾಂಕ:09.09.2022ರ ಆದೇಶದಲ್ಲಿ ಭ್ರಷ್ಟಾಚಾರ ನಿಗ್ರಹ ದಳವನ್ನು ರದ್ದುಗೊಳಿಸಿ, ನ್ಯಾಯಾಲಯವು ಮಾಡಿರುವ ಶಿಫಾರಸ್ಸುಗಳನ್ನು ಜಾರಿಗೆ ತರುತ್ತಿದೆ. ಇದರಿಂದಾಗಿ ನ್ಯಾಯಾಂಗ ನಿಂದನೆಯಾದಂತಾಗುವುದಿಲ್ಲ. |

**ಸಂಖ್ಯೆ: ಸಿಆಸುಇ 59 ಎಸಿಬಿ 2022**

**(ಬಸವರಾಜ ಬೊಮ್ಮಾಯಿ)**
**ಮುಖ್ಯಮಂತ್ರಿ**